**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 2724/2021**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

**ವಿರುದ್ಧ**

**ಆರೋಪಿ** : ಶ್ರೀ.ಮಹದೇವಸ್ವಾಮಿ ಉಃ ಕುಂಟ

:: **ದೋಷಾರೋಪಣೆ** ::

**ಶ್ರೀ ಸತೀಶ. ಕೆ.ಜಿ. ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿಯಾದಃ-

ಶ್ರೀ.ಮಹದೇವಸ್ವಾಮಿ ಉಃ ಕುಂಟ
ಬಿನ್ ಲೇಟ್ ಕೆಂದಯ್ಯ
ವಯಸ್ಸು ಸುಮಾರು 42 ವರ್ಷ,

ನಂಜನಗೂಡು ತಾಲ್ಲೂಕಿನ ದೇವಿರಮ್ಮನಹಳ್ಳಿ ಗ್ರಾಮದ ನಿವಾಸಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ, ದಿನಾಂಕ 01.01.2021 ರಂದು ಮಧ್ಯಾಹ್ನ 1.30 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ವಳಗೆರೆ ಗ್ರಾಮದಲ್ಲಿರುವ ಚಾಸಾ-1-ಶ್ರೀಮತಿ.ದೇವಮ್ಮರವರು ತಮ್ಮ ಮನೆಯ ಬಾಗಿಲನ್ನು ಹಾಕಿಕೊಂಡು ಎದುರುಗಡೆ ಮನೆ ಬಳಿ ಕುಳಿತಿದ್ದಾಗ, ಆರೋಪಿಯಾದ ನೀವು ಚಾಸಾ-1 ರವರ ಮನೆಯ ಬಾಗಿಲನ್ನು ಮಚ್ಚಿನಿಂದ ಒಡೆಯುತ್ತಿದ್ದಾಗ, ಈ ಬಗ್ಗೆ ಪ್ರಶ್ನಿಸಿದ್ದಕ್ಕೆ ಆರೋಪಿಯಾದ ನೀವು ತನಗೆ ಬೈಕ್ ತೆಗೆದುಕೊಡುವಂತೆ ಗಲಾಟೆ ಮಾಡಿ ಚಾಸಾ-1 ರವರ ಮುಂದಲೆಯನ್ನು ಹಿಡಿದು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರನ್ನು ಕೆಳಕ್ಕೆ ಬೀಳಿಸಿ ಮಾರಕಾಯುಧವಾದ ಮಚ್ಚಿನಿಂದ ಚಾಸಾ-1 ರವರ ಎಡ

ಕಪಾಲಕ್ಕೆ ಹೊಡೆದಿದ್ದಲ್ಲದೆ, ಇಟ್ಟಿಗೆಯಿಂದ ಚಾಸಾ–1 ರವರ ಬೆನ್ನಿನ ಮೇಲ್ಭಾಗಕ್ಕೆ ಸ್ವ–ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಕೈಯಿಂದ ಚಾಸಾ–1 ರವರ ಕೆಳಭಾಗದ ತುಟಿಗೆ ಸ್ವ–ಇಚ್ಛೆಯಿಂದ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ–1 ರವರ ಮನೆಯೊಳಗೆ ಹೋಗಿ ಮನೆಯಲ್ಲಿದ್ದ ಟಿ.ವಿಯನ್ನು ಉದ್ದೇಶಪೂರ್ವಕವಾಗಿ ತೆಗೆದುಕೊಂಡು ಬಂದು ಹೊರಗೆ ಬಿಸಾಡಿ ಚಾಸಾ–1 ರವರಿಗೆ ಸುಮಾರು 1000/– ರೂಪಾಯಿಗಳಷ್ಟು ನಷ್ಟವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 427 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆಃ1– ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಆರೋಪಿ ಉತ್ತರಃ

ಪ್ರಶ್ನೆಃ2– ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿ ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 19.01.2026

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.